# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

ಸಂಖ್ಯೆ:ಎ8/ಮಾರ್ಚ್20/ಪ್ರ.ಪ.ಸು/39/2019-20 ದಿನಾಂಕ:18.03.2020

**:: ಸುತ್ತೋಲೆ ::**

ವಿಷಯ:- ಮಾರ್ಚ್/ಏಪ್ರಿಲ್ 2020ರ ಮಾಹೆಯಲ್ಲಿ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಮಾಸ್ಕ್ ಹಾಕಿಕೊಂಡು ಬಂದರೆ ಅಂತಹ ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡುವ ಬಗ್ಗೆ.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾರ್ಚ್/ಏಪ್ರಿಲ್ 2020ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ದಿನಾಂಕ:27.03.2020 ರಿಂದ 09.04.2020ರವರೆಗೆ ರಾಜ್ಯಾದ್ಯಂತ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಪ್ರಸ್ತುತ ಕರ್ನಾಟಕ ರಾಜ್ಯದಲ್ಲೂ ಸಹ ಕರೋನ ವೈರಸ್ ಕೋವಿಡ್-19 ವ್ಯಾಪ್ತಿಸುತ್ತಿರುವುದನ್ನು ಗಮನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೆಲವು ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕಾಗಿದ್ದು, ಈ ಸಂಬಂಧ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಮಾಸ್ಕ್ ಹಾಕಿಕೊಂಡು ಬಂದರೆ ಪರೀಕ್ಷಾ ಕೊಠಡಿಗೆ ಹೋಗಲು ಅವಕಾಶ ಕಲ್ಪಿಸಲು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ತಿಳಿಸಿದೆ.

ಹಾಗೆಯೇ ಪರೀಕ್ಷಾ ಕೇಂದ್ರಗಳಲ್ಲಿ ಸ್ಯಾನಿಟೈಸರ್‌ಗಳನ್ನು ಇಟ್ಟು, ಪರೀಕ್ಷೆಗೆ ಹಾಜರಾಗಲು ಬರುವ ವಿದ್ಯಾರ್ಥಿಗಳು ಹಾಗೂ ಪರೀಕ್ಷಾ ಕಾರ್ಯಕ್ಕೆ ಹಾಜರಾಗುವ ಎಲ್ಲಾ ಹಂತದ ಅಧಿಕಾರಿ / ಶಿಕ್ಷಕರು / ಸಿಬ್ಬಂದಿ ವರ್ಗದವರು ಕೈಗಳನ್ನು ಸ್ವಚ್ಛಗೊಳಿಸಿಕೊಂಡು ಪರೀಕ್ಷಾ ಕೊಠಡಿಗೆ ತೆರಳುವಂತೆ ವ್ಯವಸ್ಥೆಮಾಡುವುದು. ಒಂದು ವೇಳೆ ಯಾವುದೇ ವಿದ್ಯಾರ್ಥಿಯು ಜ್ವರ, ಕೆಮ್ಮು, ನೆಗಡಿ ಇವುಗಳಿಂದ ಬಳಲುತ್ತಿರುವುದು ಕಂಡುಬಂದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಕೊಠಡಿ ವ್ಯವಸ್ಥೆಯನ್ನು ಮಾಡಿ ವಿದ್ಯಾರ್ಥಿಯು ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದು.

ಅತಿ ಹೆಚ್ಚು ಕೋವಿಡ್-19 ವ್ಯಾಪಿಸಿರುವ ಹಾಗೂ ಸೂಕ್ಷ್ಮ ಪ್ರದೇಶದ ಜಿಲ್ಲೆಗಳಲ್ಲಿ, ಪರೀಕ್ಷಾ ಕೇಂದ್ರಗಳಲ್ಲಿನ ಕೊಠಡಿಗಳ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಪ್ರತಿ ಕೊಠಡಿಗೆ 15 ರಿಂದ 20 ವಿದ್ಯಾರ್ಥಿಗಳು ಮಾತ್ರ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವಂತೆ ವ್ಯವಸ್ಥೆ ಮಾಡುವುದು ಹಾಗೂ ಆದಷ್ಟು ವಿದ್ಯಾರ್ಥಿಗಳ ಅಂತರವನ್ನು ಕಾಯ್ದುಕೊಳ್ಳುವಂತೆ ಕ್ರಮಕೈಗೊಳ್ಳಲು ಸೂಚಿಸಿದೆ.

(ಡಾ॥ ಕೆ.ಜಿ. ಜಗದೀಶ)
ಆಯುಕ್ತರು, ಸಾ.ಶಿ.ಇ
ಹಾಗೂ ಅಧ್ಯಕ್ಷರು ಕ.ಪ್ರೌ.ಶಿ.ಪ.ಮಂಡಳಿ.

**ಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಜಿಲ್ಲಾ ಉಪ ನಿರ್ದೇಶಕರು(ಆಡಳಿತ)ರವರ ಮುಖಾಂತರ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪತ್ರಿ.